ಅಸಲು ದಾವಾಃ- 196/2015 ಪಿ.ಡಬ್ಲ್ಯೂಃ- 1

ದಿನಾಂಕಃ 18.12.2024 ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಭೋಧಿಸಲಾಯಿತು.

ಮುಂದುವರೆದ ಪಾಟೀ ಸವಾಲುಃ- ಪ್ರತಿವಾದಿ ಪರ ಶ್ರೀ.ಎಸ್ ಎಂ ಬಿ ವಕೀಲರಿಂದ

ನನಗೆ ದಾವಾ ಸ್ವತ್ತಿನ ಹಕ್ಕು ಪತ್ರ ಪಂಚಾಯತಿಯವರು ಯಾವಾಗ ನೀಡಿರುತ್ತಾರೆ ಎಂದರೆ ಗೊತ್ತಿಲ್ಲ. ಪಂಚಾಯತಿಯವರು ನನಗೆ ಯಾವುದೇ ಹಕ್ಕು ಪತ್ರ ಕೊಟ್ಟಿಲ್ಲ ಹಾಗಾಗಿ ನಾನು ಗೊತ್ತಿಲ್ಲ ಎಂದು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಪ್ರತಿವಾದಿ ಮತ್ತು ಅವರ ಕಡೆಯವರು ಯಾವ ವರ್ಷ, ಯಾವ ದಿನಾಂಕ ದಾವಾ ಸ್ವತ್ತಿಗೆ ತೊಂದರೆ ನೀಡಿದ್ದರು ಎಂದರೆ ನೆನಪಿಲ್ಲ. ನನಗೆ ದಾವಾ ಸ್ವತ್ತಿನ ಮೇಲೆ ಯಾವುದೇ ಹಕ್ಕು ಅಧಿಕಾರ ಇಲ್ಲ ಎಂದರೆ ಸರಿಯಲ್ಲ. ಪ್ರತಿವಾದಿಗೆ ತೊಂದರೆ ನೀಡುವ ಉದ್ದೇಶದಿಂದ ನಾನು ಸುಳ್ಳು ವ್ಯಾಜ್ಯ ಕಾರಣ ಸೃಷ್ಟಿ ಮಾಡಿ, ಸುಳ್ಳು ದಾವೆ ಹಾಕಿ, ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆಂದರೆ ಸರಿಯಲ್ಲ. ನನಗೆ ಪಂಚಾಯತಿ ಅಧಿಕಾರಿಗಳು ಪೊಲೀಸರ ಪರಿಚಯ ಆಗಿದೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ